

ಅರುಣ ಪಿ. ಭಟ್ಟ

## ವಾರ ಭವಿಷ್ಯ: 01.09.2022ರಿಂದ 07.09.2022ರವರೆಗೆ



ಮೇಷ

ಭೂಮಿ ವ್ಯವಹಾರಗಳಲ್ಲಿ ಒಳ್ಳೆಯ ಲಾಭ ಗಳಿಸುವ ಅವಕಾಶ ಇದೆ. ದೂರದ ಪ್ರದೇಶಗಳಿಗೆ ಪ್ರಯಾಣ ಮಾಡುವ ಸಾಧ್ಯತೆಗಳಿವೆ. ಯಾವುದೇ ಮುಖ್ಯ ಕಾಗದ ಪತ್ರಗಳಿಗೆ ಸಹಿ ಹಾಕುವ ಮುನ್ನ ಪರಿಶೀಲಿಸಿ. ಮನೆಗೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡಲು ಹೆಚ್ಚಿನ ಖರ್ಚು ಮಾಡಲಿದ್ದೀರಿ. ಕೆಲವರಿಗೆ ಉದ್ಯೋಗದಲ್ಲಿ ಬಡ್ತಿ ದೊರೆಯುವ ಸಾಧ್ಯತೆ ಹೆಚ್ಚಿದೆ. ಶುಭದಿನ 06. ಹನುಮಾನ್ ಚಾಲೀಸ್ ಓದಿರಿ.



ವೃಷಭ

ನೀವು ನಂಬಿದ ವಿಚಾರಗಳನ್ನು ಪ್ರಸ್ತುತ ಪಡಿಸುವುದಕ್ಕೆ ಬಹಳ ಶ್ರಮ ಪಡುತ್ತೀರಿ. ಹಳೆಯ ಸ್ನೇಹಿತರು ಸಾಲ ಕೇಳಿದರು ಎಂದು ತಕ್ಷಣ ನೀಡಿದರೆ ವಾಪಸ್ ಬರುವುದು ಕಷ್ಟ. ಕಾನೂನು ವಿಚಾರಗಳು ನಿಮ್ಮ ವಿರುದ್ಧ ಸಾಗುತ್ತವೆ. ಬೇರೊಬ್ಬರು ನೀಡಿದ ದಾಖಲೆಯನ್ನು ನೀವು ಕಳೆದುಕೊಳ್ಳುವ ಅಪಾಯವಿದೆ. ಹತ್ತಿರದ ಸ್ಥಳವೊಂದಕ್ಕೆ ಪ್ರವಾಸ ಕೈಗೊಳ್ಳಲಿದ್ದೀರಿ. ಶುಭದಿನ 02. ಗಣೇಶಪಂಚರತ್ನ ಸ್ತೋತ್ರ ಪಠಣ ಮಾಡಿರಿ.



ಮಿಥುನ

ಒಂದೇ ಸಲಕ್ಕೆ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ. ಯಾವುದನ್ನು ಆಯ್ಕೆ ಮಾಡಿಕೊಳ್ಳಬೇಕು ಎಂಬ ಬಗ್ಗೆ ಸ್ಪಷ್ಟತೆ ಇರಲಿ. ಸರ್ಕಾರಿ ನೌಕರರಿಗೆ ವರ್ಗಾವಣೆ ಆದರೂ ಆಗಬಹುದು. ವೈಯಕ್ತಿಕ ಸಂಬಂಧದಲ್ಲಿ ಬಹಳ ಹುಷಾರಾಗಿರಬೇಕು. ಕೋರ್ಟ್‌ನಲ್ಲಿ ಪ್ರಕರಣ ನಡೆಯುತ್ತಿದ್ದರೆ ಆ ಕಡೆ ಹೆಚ್ಚಿನ ಗಮನ ನೀಡಬೇಕು. ಶುಭದಿನ 01. ಕಾಲಭೈರವಾಷ್ಟಕ ಸ್ತೋತ್ರ ಪಠಿಸಿರಿ.



ಕಟಕ

ನಿಮ್ಮ ಆದಾಯದಲ್ಲಿ ಈ ವಾರ ಹೆಚ್ಚಳ ಕಾಣಿಸಿಕೊಳ್ಳಲಿದೆ. ನಿಮ್ಮ ಶ್ರಮಕ್ಕೆ ಒಂದೊಂದಾಗಿ ಪ್ರತಿಫಲ ದೊರೆಯಲು ಆರಂಭವಾಗುತ್ತದೆ. ಸಾಮಾಜಿಕವಾಗಿ ನಿಮ್ಮ ವರ್ಚಸ್ಸು ಹೆಚ್ಚಾಗುತ್ತದೆ. ವಿದ್ಯಾರ್ಥಿಗಳಿಗೆ ಈ ವಾರ ಯಶಸ್ಸು ದೊರೆಯುವ ಅವಕಾಶಗಳು ಹೆಚ್ಚಿದೆ. ಕ್ರೀಡಾ ಕ್ಷೇತ್ರದಲ್ಲಿ ಯಶಸ್ಸು ಪಡೆಯುವ ಅವಕಾಶ ಹೆಚ್ಚಾಗಿರುತ್ತದೆ. ಶುಭದಿನ 06. ವಿಷ್ಣುಸಹಸ್ರನಾಮ ಓದಿರಿ.



ಸಿಂಹ

ನಿಮ್ಮ ವೈಯಕ್ತಿಕ ವರ್ಚಸ್ಸಿನಿಂದ ಇತರರಿಗೆ ಸಹಾಯ ಮಾಡಲು ಮುಂದಾಗುತ್ತೀರಿ. ಬಹಳ ಕಾಲದಿಂದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿದ್ದರೆ ಅದರ ಶ್ರಮದ ಫಲವನ್ನು ಪಡೆಯಲು ಇದು ಸರಿಯಾದ ಕಾಲ. ಹೊಸ ವಸ್ತುವೊಂದನ್ನು ಖರೀದಿ ಮಾಡುವ ಪಕ್ಷದಲ್ಲಿ ಖರೀದಿಸುವ ನಿಮ್ಮ ನಿರ್ಧಾರವನ್ನು ಮುಂದಕ್ಕೆ ಹಾಕುವುದೇ ಉತ್ತಮ. ಶುಭದಿನ 05. ಶ್ರೀಗೋವಿಂದಾಷ್ಟಕಮ್ ಪಠಿಸಿರಿ.



ಕನ್ಯಾ

ತಾಯಿಯ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ. ನಿಮಗೂ ಕೆಮ್ಮು ನೆಗಡಿಯಂಥ ಅನಾರೋಗ್ಯ ಸಮಸ್ಯೆಗಳು ಕಾಡಬಹುದು. ವಾರದ ಮೊದಲಾರ್ಧದಲ್ಲಿ  ಆರ್ಥಿಕ ಬಲ ಬರುತ್ತದೆ. ಉಳಿತಾಯ ಮಾಡುವ ಕಡೆಗೆ ಮನಸ್ಸು ಹರಿಯುತ್ತದೆ. ಮಕ್ಕಳ ಪ್ರಗತಿಯಿಂದ ಹೆಮ್ಮೆ ಉಂಟಾಗುತ್ತದೆ. ಬಾಕಿ ಹಣ ಬರಬೇಕಾಗಿದ್ದಲ್ಲಿ ಬರುವ ಅವಕಾಶ ಹೆಚ್ಚಿರುತ್ತದೆ. ಶುಭದಿನ 04. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.



ತುಲಾ

ಉದ್ಯೋಗ ಅಥವಾ ವ್ಯಾಪಾರ ನಿಮಿತ್ತ ದೂರ ಪ್ರಯಾಣ ಮಾಡಬೇಕಾದ ಸನ್ನಿವೇಶ ಎದುರಾಗಲಿದೆ. ಉದ್ಯೋಗ ಸ್ಥಳದಲ್ಲಿ ಸ್ವಲ್ಪ ಮಟ್ಟಿಗೆ ಒತ್ತಡ ಕಾಣಿಸಿಕೊಳ್ಳಬಹುದು. ಆರೋಗ್ಯದಲ್ಲೂ ಏರುಪೇರಾಗುತ್ತದೆ. ಸೋದರ–ಸೋದರಿಯರ ಜತೆಗೆ ಉತ್ತಮ ಬಾಂಧವ್ಯ ಇರುತ್ತದೆ. ಸಂತಾನ ನಿರೀಕ್ಷೆಯಲ್ಲಿ ಇರುವ ದಂಪತಿಗೆ ಶುಭ ಸುದ್ದಿ ಕೇಳುವ ಯೋಗವಿದೆ. ಶುಭದಿನ 05. ದೇವಿ ಆರಾಧನೆ, ಸೌಂದರ್ಯಲಹರಿ ಪಠಿಸಿರಿ.



ವೃಶ್ಚಿಕ

ಹೊಸದಾಗಿ ಮನೆ ಕಟ್ಟಬೇಕು ಎಂದು ಆಲೋಚನೆ ಮಾಡುತ್ತಿರುವವರಿಗೆ ಯೋಜನೆ ಅನುಷ್ಠಾನಕ್ಕೆ ತರಲು ಸೂಕ್ತ ಸಮಯ. ನೌಕರಸ್ಥರಿಗೆ ಮೇಲಧಿಕಾರಿಗಳ ಜತೆಗೆ ಉತ್ತಮ ಸಂಬಂಧ ಇರುತ್ತದೆ. ಪ್ರೀತಿ–ಪ್ರೇಮದಲ್ಲಿ ಇರುವವರು ಸಂಗಾತಿ ಜತೆಗೆ ಪ್ರಮುಖವಾದ ವಿಚಾರಗಳನ್ನು ಚರ್ಚೆ ನಡೆಸಲಿದ್ದೀರಿ. ವಾರದ ಅಂತ್ಯಕ್ಕೆ ಸಕಾರಾತ್ಮಕ ಬೆಳವಣಿಗೆ ಕಾಣುತ್ತೀರಿ. ಶುಭದಿನ 04. ಶಿವಪೂಜೆ, ಶಿವಪಂಚಾಕ್ಷರಸ್ತೋತ್ರ ಪಠಿಸಿರಿ.



ಧನಸ್ಸು

ಉದ್ಯೋಗಸ್ಥರಿಗೆ ಮೇಲಧಿಕಾರಿಗಳಿಂದ ಪ್ರಶಂಸೆ. ವ್ಯಾಪಾರಸ್ಥರಿಗೆ ಸಮಸ್ಯೆಗಳು ಎದುರಾಗುವ ಸಂಭವ. ನವವಿವಾಹಿತರಿಗೆ ವೈವಾಹಿಕ ಜೀವನ ಚೆನ್ನಾಗಿರುತ್ತದೆ. ಸಂಗಾತಿ ಜತೆಗೆ ಸುಮಧುರವಾದ ಕ್ಷಣಗಳನ್ನು ಅನುಭವಿಸಲಿದ್ದೀರಿ. ಭೂಮಿ ಖರೀದಿಗೆ ಒಳ್ಳೆಯ ಸಮಯ. ಮನೆಯಲ್ಲಿ ಶುಭ ಕಾರ್ಯ ನಡೆಯುವ ಸಾಧ್ಯತೆ ಇದೆ. ಶುಭದಿನ 07. ದೇವ್ಯಪರಾಧಕ್ಷಮಾಪಣ ಸ್ತೋತ್ರ ಪಠಿಸಿರಿ.



ಮಕರ

ಸಾಮಾಜಿಕವಾಗಿ, ರಾಜಕೀಯವಾಗಿ ಉತ್ತಮ ಹೆಸರು ಮಾಡಲು ಅವಕಾಶಗಳು ದೊರೆಯುತ್ತವೆ. ನಿಮ್ಮ ಜನಪ್ರಿಯತೆ ಕೂಡ ಹೆಚ್ಚಾಗಲಿದೆ. ವಿದ್ಯಾರ್ಥಿಗಳು ಹೆಚ್ಚು ಶ್ರಮ ವಹಿಸಿ ವ್ಯಾಸಂಗ ಮಾಡಿ ಗುರಿಯನ್ನು ತಲುಪಲಿದ್ದೀರಿ. ಕೋರ್ಟ್‌ನಲ್ಲಿ ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ಅದಕ್ಕಾಗಿ ಹೆಚ್ಚಿನ ಖರ್ಚು ಮಾಡಬೇಕಾಗುತ್ತದೆ. ಆರೋಗ್ಯವು ಉತ್ತಮವಾಗಿರುತ್ತದೆ. ಶುಭದಿನ 06. ಸಂಕಷ್ಟಹರ ಮಹಾಗಣಪತಿ ಪೂಜೆ ಮಾಡಿರಿ.



ಕುಂಭ

ಕೌಟುಂಬಿಕ ವಿಚಾರಗಳಲ್ಲಿ ಉತ್ತಮವಾದ ಪ್ರಗತಿಯನ್ನು ಕಾಣಲಿದ್ದೀರಿ. ಮಾರಾಟ ವಿಭಾಗದಲ್ಲಿ ಕೆಲಸ ನಿರ್ವಹಿಸುವವರು ಗುರಿ ಮುಟ್ಟುವಲ್ಲಿ ಸಫಲರಾಗುತ್ತೀರಿ. ಬಂಡವಾಳ ಹೂಡಿಕೆಗೆ ಹಲವು ಅವಕಾಶಗಳಿದ್ದು ಆರಿಸಿಕೊಳ್ಳುವಲ್ಲಿ ನೀವು ಯಶಸ್ಸು ಪಡೆಯುತ್ತೀರಿ. ಮಕ್ಕಳಿಗೆ ಸಂಬಂಧ ಹುಡುಕುತ್ತಿದ್ದಲ್ಲಿ ಅದರಲ್ಲಿ ಯಶಸ್ಸು ಕಾಣುವ ಅವಕಾಶ ಹೆಚ್ಚಾಗಿದೆ. ಶುಭದಿನ 02. ಶ್ರೀ ಲಕ್ಷ್ಮೀ ನರಸಿಂಹಪಂಚರತ್ನ ಸ್ತೋತ್ರ ಪಠಿಸಿರಿ.



ಮೀನ

ವಾರ ಪೂರ್ತಿ ಕೆಲಸದಲ್ಲೇ ಮುಳುಗುತ್ತೀರಿ. ಈ ಮಧ್ಯೆ ಅನಾರೋಗ್ಯ ಉಂಟಾಗುವ ಸಂಭವವಿದೆ. ಶುಭ ಕಾರ್ಯವೊಂದನ್ನು ಆಯೋಜಿಸುವಿರಿ. ಉದ್ಯೋಗಿಗಳಿಗೆ ನೀವು ಪಟ್ಟ ಶ್ರಮಕ್ಕೆ ಮೇಲಧಿಕಾರಿಗಳಿಂದ ಮೆಚ್ಚುಗೆ ದೊರೆಯುತ್ತದೆ. ವ್ಯಾಪಾರ ವ್ಯವಹಾರ ಮಾಡುತ್ತಿರುವವರಿಗೆ ಆದಾಯದಲ್ಲಿ ಹೆಚ್ಚಳ ಆಗಲಿದೆ. ಇದರಿಂದ ನಿಮಗೆ ಸಂತೋಷ ಸಮಾಧಾನ ಮೂಡಲಿದೆ. ಶುಭದಿನ 07. ಲಿಂಗಾಷ್ಟಕ ಪಠಿಸಿರಿ.